ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಉತ್ತರ ಕರ್ನಾಟಕ ಭಾಗದಲ್ಲಿ ಮೀನುಗಾರಿಕೆ ಅಭಿವೃದ್ಧಿ ಕುರಿತು

ಶ್ರೀಕವಟಗಿಮಠಮಹಾಂತೇಶಮಲ್ಲಿಕಾರ್ಜುನ(ಸ್ಥಳೀಯಸಂಸ್ಥೆಗಳಕ್ಷೇತ್ರ):-

200 (396) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉತ್ತರ ಕರ್ನಾಟಕ ಭಾಗದಲ್ಲಿ ಮೀನುಗಾರಿಕೆ ಅಭಿವೃದ್ಧಿಗೆ ಸಾಕಷ್ಟು ಅನುಕೂಲತೆಗಳಿದ್ದರೂ ನಿರೀಕ್ಷಿತ ಬದಲಾವಣೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಉತ್ತರ ಕರ್ನಾಟಕದಲ್ಲಿ ಹಲವಾರು ಕೆರೆ-ಕಟ್ಟೆಗಳು ಹಾಗೂ ಜಲಾಶಯಗಳಿದ್ದರೂ ಮೀನುಗಾರಿಕೆ ಅಭಿವೃದ್ಧಿಗೆ ಕ್ರಮಕೈಗೊಳ್ಳದಿರಲು ಕಾರಣವೇನು;

(ಇ) ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದಡಿಯಲ್ಲಿ ನಡೆಸಲಾಗುವ ಶಾಖೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕೆ.ಎಸ್.ಡಿ.ಸಿ. ಯಿಂದ ನಡೆಸುವ ಕ್ಯಾಂಟೀನುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಉತ್ತರ ಕರ್ನಾಟಕದ ಯಾವ ಯಾವ ಜಿಲ್ಲೆಗಳಲ್ಲಿ ಇದರ ಶಾಖೆಗಳಿವೆ; ಇಲ್ಲದಿದ್ದಲ್ಲಿ, ಇದರ ಶಾಖೆಗಳನ್ನು ಪ್ರಾರಂಭಿಸಲು ಇರುವ ಅಡಚಣೆಗಳೇನು ?